**JANUARY 29,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಕಲ್ಯಾಣ ಕರ್ನಾಟಕದಲ್ಲಿ,** 6 ಸಾವಿರದ 200 ಕೋಟಿ ರೂಪಾಯಿ ವೆಚ್ಚದಲ್ಲಿ ರೈಲ್ವೇ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಇದರಲ್ಲಿ 2 ಸಾವಿರದ 850 ಕೋಟಿ ರೂಪಾಯಿ ಮೊತ್ತದಲ್ಲಿ, ಗದಗ–ವಾಡಿ ಹಾಗೂ ವಡಗೇರಾ–ರಾಯಚೂರು ಮಧ್ಯೆ ರೈಲು ಸಂಪರ್ಕ ಯೋಜನೆಗಳನ್ನು 2027ರ ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು ಎಂದು ರೇಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು. ಯಾದಗಿರಿ ರೈಲ್ವೇ ನಿಲ್ದಾಣದಲ್ಲಿ ಹಜರತ್ ನಿಜಾಮುದ್ದೀನ್–ಕೆಎಸ್ ಆರ್ ಬೆಂಗಳೂರು, ರಾಜಧಾನಿ ಎಕ್ಸ್ಪ್ರೆಸ್ ಹೆಚ್ಚುವರಿ ರೈಲು ನಿಲುಗಡೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. 480 ಕಿಲೋಮೀಟರ್ ಉದ್ದದ ವಾಡಿ–ಮಂತ್ರಾಲಯ, ಬೀದರ–ಕಮಲಾಪುರ ವರೆಗಿನ ರೇಲ್ವೇ ವಿದ್ಯುದೀಕರಣ ಯೋಜನೆ ಪೂರ್ಣಗೊಳಿಸಲಾಗಿದೆ. ಯಾದಗಿರಿ, ರಾಯಚೂರು, ಬೀದರ್ ರೈಲು ನಿಲ್ದಾಣಗಳನ್ನು ತಲಾ 26 ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಿ, 2025 ಡಿಸೆಂಬರ್ ಒಳಗೆ ಲೋಕಾರ್ಪಣೆಗೊಳಿಸಲಾಗುವುದು ಎಂದರು.

<><><>

**ಪಾರಂಪರಿಕ ನಂದಿ ಕೃಷಿಯನ್ನು ಉತ್ತೇಜಿಸಿ,** ಸಾವಯವ ಕೃಷಿ ಮೂಲಕ ಕೃಷಿ ಕ್ಷೇತ್ರದ ಅಭ್ಯುದಯದ ಉದ್ದೇಶದೊಂದಿಗೆ, ಗದಗ ಶ್ರೀ ನಂದಿವೇರಿ ಸಂಸ್ಥಾನ ಮಠವು ಅಯೋಜಿಸಿದ, ನಂದಿಭೂಷಿತ ಕಪ್ಪತಜ್ಯೋತಿ ಯಾತ್ರೆಯು ಯಶಸ್ವಿಯಾಗಿ ಜರುಗಿತು. ಎರಡು ದಿನಗಳ ಕಾಲ ನಡೆದ ಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯ ರೈತರು ಪಾಲ್ಗೊಂಡಿದ್ದರು. ಚನ್ನಮ್ಮನ ಕಿತ್ತೂರಿನಿಂದ ಆರಂಭಗೊಂಡ ಯಾತ್ರೆಗೆ ಜನರ ಸ್ಪಂದನೆ ಹಾಗೂ ಯಾತ್ರೆಯ ಸಂಕಲ್ಪದ ಬಗ್ಗೆ ಮಾಹಿತಿ ನೀಡಿದ್ದಾರೆ, ಗದಗ ಜಿಲ್ಲೆ ಕಪ್ಪತಗುಡ್ಡ ನಂದಿವೇರಿ ಸಂಸ್ಥಾನ ಮಠದ ಶ್ರೀ ಶಿವಕುಮಾರ ಸ್ವಾಮೀಜಿಯವರು...

<><><>

**ಬೈಟ್: ಶ್ರೀ ಶಿವಕುಮಾರ ಸ್ವಾಮೀಜಿ 38 ಸೆಕೆಂದುಗಳು**

**ರಾಜ್ಯ ವನ್ಯಜೀವಿ ಮಂಡಳಿಯ** ಸಭೆ ಗೃಹ ಕಚೇರಿ ಕೃ ಷ್ಣದಲ್ಲಿ ಜರುಗಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ರಾಜ್ಯ ಅರಣ್ಯ ಇಲಾಖೆ ಸಚಿವರಾದ ಈಶ್ವರ್ ಖಂಡ್ರೆ, ಶಾಸಕರು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಪಾಲ್ಗೊಂಡಿದ್ದರು. ರಾಮನಗರ ಜಿಲ್ಲಾಧಿಕಾರಿ ಕಚೇರಿಯಲ್ಲಿ, ಆನೆ ಮತ್ತು ಮಾನವ ಸಂಘರ್ಷದಿಂದ ರೈತರಿಗೆ ಆಗುತ್ತಿರುವ ಬೆಳೆ ನಾಶ ಹಾಗೂ ಜೀವ ಹಾನಿಯ ಕುರಿತು ಮಹತ್ವದ ಸಭೆ ನಡೆಯಿತು. ಅರಣ್ಯ ಸಚಿವರಾದ ಈಶ್ವರ ಖಂಡ್ರೆ ಅವರು ಪಾಲ್ಗೊಂಡು, ಸಮಸ್ಯೆಗಳ ಪರಿಹಾರಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

<><><>

**ಪ್ರೊಫೆಸರ್ ಎಸ್.ಎಂ ವೃಷಬೇಂದ್ರ ಸ್ವಾಮಿ** ಅವರು ಕನ್ನಡ ಸಾರಸ್ವತ ಲೋಕದ ಧೀಮಂತ ವ್ಯಕ್ತಿ, ನಾಡು ಕಂಡ ಬಹುಮುಖ ಪ್ರತಿಭೆ ಎಂದು ಸಾಹಿತಿ ಡಾಕ್ಟರ್ ಜಿ.ಎಂ ಹೆಗಡೆ ಹೇಳಿದರು. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ ಆಯೋಜಿಸಿದ ಎಸ್.ಎಂ ವೃಷಭೇಂದ್ರ ಸ್ವಾಮಿ ಸ್ಮರಣ ದತ್ತಿ ಅಂಗವಾಗಿ ಜರುಗಿದ 'ಕನ್ನಡ ಸಾಹಿತ್ಯದಲ್ಲಿ ಅಲ್ಲಮ ಪ್ರಭುದೇವ' ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<><><>

**ವಿಜಯನಗರದಲ್ಲಿ** ಫೆಬ್ರವರಿ 28ರಿಂದ ಮಾರ್ಚ್ 2 ರ ತನಕ ಜರಗುವ ಹಂಪಿ ಉತ್ಸವವನ್ನು ಅದ್ದೂರಿಯಾಗಿ ಜನೋತ್ಸವದಂತೆ ಆಚರಿಸಲು, ಸಂಘ ಸಂಸ್ಥೆಗಳ ಸಹಕಾರ ಅಗತ್ಯ ಎಂದು ಜಿಲ್ಲಾಧಿಕಾರಿ ಎಂ.ಎಸ್ ದಿವಾಕರ್ ಹೇಳಿದರು. ಜಿಲ್ಲಾಧಿಕಾರಿ ಕಾರ್ಯಾಲಯದಲ್ಲಿ ಜರುಗಿದ ಹಂಪಿ ಉತ್ಸವದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ತಮ್ಮ ಸಲಹೆಗಳನ್ನು ನೀಡಿದರು.

<><><>

**ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ** ಯೋಜನೆಗಳಲ್ಲಿ ಒಂದಾಗಿರುವ, ಯುವನಿಧಿ ಯೋಜನೆಯ ನೋಂದಣಿ ಅವಧಿಯನ್ನು ಉತ್ತರ ಕನ್ನಡ ಜಿಲ್ಲೆಯಲ್ಲಿ, ಫೆಬ್ರುವರಿ 15ರ ವರೆಗೆ ವಿಸ್ತರಿಸಲಾಗಿದೆ. ಉದ್ಯೋಗ ಸಿಗದ ಅರ್ಹ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ ವೆಬ್‌ಸೈಟ್, sevasindhugs.karnataka.gov.in ಮೂಲಕ ಸಮೀಪದ ಗ್ರಾಮ ಒನ್, ಕರ್ನಾಟಕ ಒನ್ ಅಥವಾ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿಗಳು ತಿಳಿಸಿದ್ದಾರೆ.

<><><>

**ವಿದ್ಯಾರ್ಥಿ, ಯುವಜನತೆ ಮತ್ತು ಸಾರ್ವಜನಿಕರು ಸಂಚಾರ ನಿಯಮಗಳನ್ನು** ಕಡ್ಡಾಯವಾಗಿ ಪಾಲಿಸುವತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಚಿಕ್ಕಬಳ್ಳಾಪುರ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ಹೇಳಿದ್ದಾರೆ.

<><><>

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 2024–** 25ನೆ ಸಾಲಿನಲ್ಲಿ ಎಪ್ರಿಲ್‌ನಿಂದ ಡಿಸೆಂಬರ್‌ವರೆಗೆ 30 ಕುಷ್ಠರೋಗಿಗಳನ್ನು ಆರೋಗ್ಯ ಇಲಾಖೆ ಗುರುತಿಸಿದೆ ಎಂದು ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾಕ್ಟರ್ ಸುದರ್ಶನ್ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>